ಮುಹಮ್ಮದರ ಆತ್ಮ ಯಾರ ಕೈಯಲ್ಲಿದೆಯೋ ಅವನ ಮೇಲಾಣೆ! ಈ ಸಮುದಾಯದಲ್ಲಿ ಸೇರಿದ ಯಹೂದಿಗಳು, ಕ್ರೈಸ್ತರು ಅಥವಾ ಇತರ ಯಾರೇ ಆಗಲಿ, ನನ್ನ ಬಗ್ಗೆ ಕೇಳಿಯೂ, ನನ್ನನ್ನು ಯಾವ ಸಂದೇಶದೊಂದಿಗೆ ಕಳುಹಿಸಲಾಗಿದೆಯೋ ಅದರಲ್ಲಿ ವಿಶ್ವಾಸವಿಡದೆ ಸಾವನ್ನಪ್ಪಿದರೆ, ಅವರು ನರಕವಾಸಿಗಳಲ್ಲಿ ಸೇರುವುದು ಖಚಿತ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಮುಹಮ್ಮದರ ಆತ್ಮ ಯಾರ ಕೈಯಲ್ಲಿದೆಯೋ ಅವನ ಮೇಲಾಣೆ! ಈ ಸಮುದಾಯದಲ್ಲಿ ಸೇರಿದ ಯಹೂದಿಗಳು, ಕ್ರೈಸ್ತರು ಅಥವಾ ಇತರ ಯಾರೇ ಆಗಲಿ, ನನ್ನ ಬಗ್ಗೆ ಕೇಳಿಯೂ, ನನ್ನನ್ನು ಯಾವ ಸಂದೇಶದೊಂದಿಗೆ ಕಳುಹಿಸಲಾಗಿದೆಯೋ ಅದರಲ್ಲಿ ವಿಶ್ವಾಸವಿಡದೆ ಸಾವನ್ನಪ್ಪಿದರೆ, ಅವರು ನರಕವಾಸಿಗಳಲ್ಲಿ ಸೇರುವುದು ಖಚಿತ."
[صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ಅಲ್ಲಾಹನ ಮೇಲೆ ಆಣೆ ಮಾಡುತ್ತಾ ಹೇಳುವುದೇನೆಂದರೆ, ಈ ಸಮುದಾಯದಲ್ಲಿ ಸೇರಿದ ಯಹೂದಿಗಳು, ಕ್ರೈಸ್ತರು ಅಥವಾ ಇತರ ಯಾರೇ ಆಗಲಿ, ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಗ್ಗೆ ಕೇಳಿಯೂ, ಅವರ ಬೋಧನೆಯು ತಲುಪಿಯೂ, ಅದರಲ್ಲಿ ವಿಶ್ವಾಸವಿಡದೆ ಸಾವನ್ನಪ್ಪಿದರೆ, ಅವರು ಶಾಶ್ವತವಾಗಿ ನರಕವಾಸಿಗಳಾಗುವುದು ಖಂಡಿತ.

https://sunnah.global/hadeeth/kn/show/3272